# ಕರ್ನಾಟಕ ವಿಧಾನ ಪರಿಷತ್ತು

**ವಿಷಯ: ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೋಟಾ ಶ್ರೀನಿವಾಸ ಪೂಜಾರಿ ಇವರು ನಿಯಮ 72ರಡಿ "ಉಡುಪಿ ಜಿಲ್ಲೆಯು ಸೇರಿದಂತೆ ಕೆಲವು ಜಿಲ್ಲೆಗಳಲ್ಲಿ ಆರೋಗ್ಯ ಕರ್ನಾಟಕ – ಆಯುಷ್ಮಾನ್ ಭಾರತ್ ಯೋಜನೆಯಡಿ ಬರುವ ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳ ಬೇಡಿಕೆಗೆ ತಕ್ಕಂತೆ ಬೆಡ್‌ಗಳು ಲಭ್ಯವಿಲ್ಲದೆ ರೋಗಿಗಳು ಪರದಾಡುತ್ತಿರುವುದು, ಅಪಘಾತ, ಹೃದಯಘಾತದಂತ ತುರ್ತು ವೈದ್ಯಕೀಯ ಸಂದರ್ಭದಲ್ಲಿ ಸರ್ಕಾರಿ ಆಸ್ಪತ್ರೆಯ ವೈದ್ಯರಿಂದ ಶಿಫಾರಸ್ಸು ಪತ್ರ ಕೇಳುವುದು ಸೇರಿದಂತೆ ಆಯುಷ್ಮಾನ್ ಯೋಜನೆಯು ಅನುಷ್ಠಾನದಲ್ಲಿನ ಸಮಸ್ಯೆಗಳು ಹಾಗೂ ರೋಗಿಗಳಿಗೆ ಆಗುತ್ತಿರುವ ತೊಂದರೆಗಳ ಕುರಿತ ಪ್ರಸ್ತಾಪಕ್ಕೆ:-**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-**

- ರಾಜ್ಯದಲ್ಲಿ ಉಡುಪಿ ಜಿಲ್ಲೆಯು ಸೇರಿದಂತೆ, ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ ಯೋಜನೆಯಡಿ ಒಟ್ಟು 3489 ಆಸ್ಪತ್ರೆಗಳು (2950 ಸರ್ಕಾರಿ ಹಾಗೂ 539 ಖಾಸಗಿ ಆಸ್ಪತ್ರೆಗಳು) ನೋಂದಾವಣೆಯಾಗಿ ಕಾರ್ಯನಿರ್ವಹಿಸುತ್ತಿವೆ.

- ಉಡುಪಿ ಜಿಲ್ಲೆಯಲ್ಲಿ 72 ಸರ್ಕಾರಿ ಆಸ್ಪತ್ರೆ ಮತ್ತು 14 ಖಾಸಗಿ ಆಸ್ಪತ್ರೆಗಳು ನೋಂದಾವಣೆಯಾಗಿವೆ.

- ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ ಯೋಜನೆಯಡಿ ನೋಂದಾಯಿತ ಆಸ್ಪತ್ರೆಗಳ ಒಡಂಬಡಿಕೆಯನ್ವಯ ಆಸ್ಪತ್ರೆಯ ಒಟ್ಟು ಹಾಸಿಗೆಗಳ ಸಾಮರ್ಥ್ಯದಲ್ಲಿ ಶೇಕಡ 25%ರಷ್ಟು ಹಾಸಿಗೆಗಳನ್ನು ಮೀಸಲಿಡಬೇಕಾಗಿರುತ್ತದೆ.

- ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ಉಡುಪಿ ಜಿಲ್ಲೆಯೂ ಸೇರಿದಂತೆ ರಾಜ್ಯದಲ್ಲಿ ಒಟ್ಟಾರೆ ಖಾಸಗಿ ಆಸ್ಪತ್ರೆಗಳಲ್ಲಿ 2,83,686 ಫಲಾನುಭವಿಗಳು ದಾಖಲಾಗಿ ವೈದ್ಯಕೀಯ ಚಿಕಿತ್ಸೆಯನ್ನು ಪಡೆದಿರುತ್ತಾರೆ.

- ಉಡುಪಿ ಜಿಲ್ಲೆಯಲ್ಲಿನ ನೋಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ದಿನಾಂಕ: 01.04.2022 ರಿಂದ 04.12.2023ರವರೆಗೆ 11,833 ಫಲಾನುಭವಿಗಳು ದಾಖಲಾಗಿ ವೈದ್ಯಕೀಯ ಚಿಕಿತ್ಸೆಯನ್ನು ಪಡೆದಿರುತ್ತಾರೆ.

- ಸರ್ಕಾರದ ಆದೇಶ ಸಂಖ್ಯೆ HFW 69 CGE 2018 ದಿ:15-011-2018 ರ ನಿಯಮ 27 & 31 ರಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಚಿಕಿತ್ಸೆಗಾಗಿ ದಾಖಲಾದ ರೋಗಿಗಳನ್ನು ಬದಲಿ ಅಥವಾ ಮೇಲ್ದರ್ಜೆ ಆಸ್ಪತ್ರೆಗಳಿಗೆ ರೆಫರಲ್ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.

- ತುರ್ತು ಪ್ರಕರಣಗಳನ್ನು ಹೊರತುಪಡಿಸಿ ಉಳಿದ ದ್ವಿತೀಯ ಮತ್ತು ತೃತೀಯ ವರ್ಗದ ರೋಗಿಗಳಿಗೆ ಚಿಕಿತ್ಸೆ ಲಭ್ಯವಿದ್ದರೆ ಆಯಾ ಸರ್ಕಾರಿ ಆಸ್ಪತ್ರೆಗಳಲ್ಲೇ ಚಿಕಿತ್ಸೆ ನೀಡಲಾಗುವುದು. ಒಂದು ವೇಳೆ ಲಭ್ಯವಿಲ್ಲದಿದ್ದಲ್ಲಿ ORS (ONLINE REFFERAL SYSTEM) ಮುಖಾಂತರ ಶಿಫಾರಸ್ಸು ಪತ್ರ ಪಡೆದುಕೊಂಡು, ಫಲಾನುಭವಿಗಳು ಇಚ್ಛಿಸಿದ ಖಾಸಗಿ ಆಸ್ಪತ್ರೆಯಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆಯಬಹುದಾಗಿರುತ್ತದೆ.



Scanned with OKEN Scanner

- ಕೆಲವೊಮ್ಮೆ ತುರ್ತು (ಅಪಘಾತ, ಹೃದಯಾಘಾತ ಮತ್ತು ಇನ್ನಿತರ) ಸಂದರ್ಭಗಳಲ್ಲಿ ಫಲಾನುಭವಿಗಳು ಯಾವುದೇ ರೆಫರಲ್ ಪತ್ರವಿಲ್ಲದೇ 171 ಚಿಕಿತ್ಸಾ ವಿಧಾನಗಳಿಗೆ ನೇರವಾಗಿ ನೋಂದಾಯಿತ ಆಸ್ಪತ್ರೆಗಳಿಗೆ (ಖಾಸಗಿ ಅಥವಾ ಸರ್ಕಾರಿ) ಭೇಟಿ ನೀಡಿ ಚಿಕಿತ್ಸೆಯನ್ನು ಪಡೆದುಕೊಳ್ಳಬಹುದು ಹಾಗೂ ಈ ರೋಗಿಗಳಿಗೆ ಸಮಯೋಚಿತ ಚಿಕಿತ್ಸಾ ವಿಧಾನವನ್ನು ಪ್ರಾರಂಭಿಸಿ, ಆ ನಂತರ 24 ಗಂಟೆಗಳೊಳಗೆ ಪೂರ್ವಾನುಮತಿಗೆ ಸಲ್ಲಿಸುವ ಅವಕಾಶವನ್ನು ಸಹ ಕಲ್ಪಿಸಲಾಗಿದೆ.

**ಕಡತ ಸಂಖ್ಯೆ: ಆಕುಕ/ನಿಯಮ 72 (ಉಡುಪಿ)/ 2023**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

Scanned with OKEN Scanner